# ಮನುಸ್ಮೃತಿ ಜಾರಿಗೆ ಹುನ್ನಾರ

## ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನದ ಕಾರ್ಯಕ್ರಮದಲ್ಲಿ ಸಿಎಂ ಎಚ್ಚರಿಕೆ



**ಬೆಂಗಳೂರು:** ಸಂವಿಧಾನ ವಿರೋಧಿ ಶಕ್ತಿಗಳು ಸಂವಿಧಾನವನ್ನು ನಾಶಗೊಳಿಸಿ ಮತ್ತೆ ಮನುಸ್ಮೃತಿ ಜಾರಿಗೆ ಹುನ್ನಾರ ನಡೆಸುತ್ತಿವೆ. ಈ ಬಗ್ಗೆ ಎಚ್ಚರ ಮತ್ತು ಜಾಗೃತಿ ಇರಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ನಾಡಿಗೆ ಕರೆ ನೀಡಿದ್ದಾರೆ.

ಸಮಾಜ ಕಲ್ಯಾಣ ಇಲಾಖೆ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನದ ಅಂಗವಾಗಿ ವಿಧಾನಸೌಧದಲ್ಲಿ ಆಯೋಜಿಸಿದ್ದ ಭಾರತದ ಸಂವಿಧಾನ ಪೀಠಿಕೆಯ ಜಾಗತಿಕ ವಾಚನದ ಅಭೂತಪೂರ್ವ ಕಾರ್ಯಕ್ರಮವನ್ನು ಸಂವಿಧಾನ ಪೀಠಿಕೆ ಓದುವ ಮೂಲಕ ಉದ್ಘಾಟಿಸಿ ಮಾತನಾಡಿದರು. ಸಂವಿಧಾನದ ನಾಶ ಮತ್ತು ಮನುಸ್ಮೃತಿಯ ಜಾರಿ ಎಂದರೆ ಶೇ.90 ರಷ್ಟು ಭಾರತೀಯರನ್ನು ಮತ್ತೆ ಗುಲಾಮಗಿರಿಗೆ ತಳ್ಳುವುದಾಗಿದೆ. ಇದಕ್ಕಾಗಿ ಬಹಳ ಕುತಂತ್ರಗಳು ನಡೆಯುತ್ತಿವೆ ಎಂದು ಎಚ್ಚರಿಸಿದರು.

We the people of India

ಎನ್ನುವ ಮೂಲಕವೇ ನಮ್ಮ ಸಂವಿಧಾನ ತೆರೆದುಕೊಳ್ಳುತ್ತದೆ. ಸಂವಿಧಾನದ ಆಶಯಗಳನ್ನು ಪರಿಣಾಮಕಾರಿಯಾಗಿ ಅರ್ಥೈಸಿಕೊಂಡು ಪಾಲಿಸದಿದ್ದರೆ ಸಮ ಸಮಾಜ ನಿರ್ಮಾಣ ಸಾಧ್ಯವಿಲ್ಲ. ಸಂವಿಧಾನದ ಸಮ ಸಮಾಜ ಮತ್ತು ಜಾತ್ಯತೀತ ತತ್ವದ ಆಶಯಗಳಂತೆಯೇ ನಮ್ಮ ಸರ್ಕಾರ ಸರ್ವರ ಏಳಿಗೆಯ ಕಾರ್ಯಕ್ರಮಗಳನ್ನು ಜಾರಿ ಮಾಡಿದೆ. ಜನರ ಹಣವನ್ನು ಮತ್ತೆ ಜನರ ಬದುಕಿಗೇ ಮರಳಿಸುವುದು ನಮ್ಮ ಕಾರ್ಯಕ್ರಮಗಳ ಉದ್ದೇಶವಾಗಿದೆ ಎಂದರು.

→P2

## ರಂಗವೇದಿಕೆಯಲ್ಲಿ ಕುಸಿದ ಕಲಾವಿದ ಸಾವು

**ವಿಜಯಪುರ:** ನಿನ್ನೆ ರಾತ್ರಿಯಲ್ಲಿ ನಾಟಕ ಪ್ರದರ್ಶನ ಮಾಡುವ ವೇಳೆ ರಂಗ ವೇದಿಕೆಯಲ್ಲೇ ಕುಸಿದು ಬಿದ್ದು ಯುವ ಕಲಾವಿದ ಸಾವನ್ನಪ್ಪಿರುವ ದುರ್ಘಟನೆ ನಡೆದಿದೆ.

ವಿಜಯಪುರ ಜಿಲ್ಲೆ ತಿಕೋಟಾ ತಾಲೂಕಿನ ಕೋಟ್ಯಾಳ ಗ್ರಾಮದಲ್ಲಿ ನಿನ್ನೆ ಕೋಟ್ಯಾಳ ಗ್ರಾಮ ದೇವತೆ ಮುಕ್ತಾಕರ ದೇವರ ಜಾತ್ರೆಯ ನಿಮಿತ್ತ ನಾಟಕ ಪ್ರದರ್ಶನ ಮಾಡಲಾಗಿತ್ತು. ರಾತ್ರಿ ನಾಟಕ ಪ್ರದರ್ಶನ ಮಾಡುವ ವೇಳೆ ನಾಟಕದಲ್ಲಿ ಹಾಸ್ಯಪಾತ್ರ ಮಾಡಿದ ಶರಣು ಬಾಗಲಕೋಟೆ (28)